# <u>ಕರ್ನಾಟಕ ಸರ್ಕಾರದ ನಡವಳಿ</u>

**ವಿಷಯ**:– 2006ರ ಯುಜಿಸಿ/ಐಸಿಎಆರ್/ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ವೇತನ ಪಡೆದು ನಿವೃತ್ತರಾದ ಬೋಧಕ ಮತ್ತು ತತ್ಸಮಾನ ವರ್ಗದವರಿಗೆ ಹಾಗೂ ನಿವೃತ್ತ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆ ದರಗಳನ್ನು ಕ್ರಮಬದ್ಧಗೊಳಿಸುವ ಬಗ್ಗೆ.

**ಓದಲಾಗಿದೆ**:– (1) ಸರ್ಕಾರಿ ಆದೇಶ ಸಂಖ್ಯೆ: ಇಡಿ 37 ಯುಎನ್‌ಇ 2009 ದಿನಾಂಕ: 24.12.2009.

(2) ಸರ್ಕಾರಿ ಆದೇಶ ಸಂಖ್ಯೆ: ಎಹೆಚ್‌ಡಿ 64 ಎಯುಎ 2009 ದಿನಾಂಕ: 24.03.2010.

(3) ಸರ್ಕಾರಿ ಆದೇಶ ಸಂಖ್ಯೆ:ಲಾ 147 ಎಲ್‌ಎಸಿ 2009 ದಿನಾಂಕ:24.06.2010

(4) ಸರ್ಕಾರಿ ಆದೇಶ ಸಂಖ್ಯೆ:ಅಇ (ವಿ) 6 ಸಿಪಿಪಿ 2010 ದಿನಾಂಕ:17.08.2010

(5) ಸರ್ಕಾರಿ ಆದೇಶ ಸಂಖ್ಯೆ:ಅಇ (ವಿ) 149 ಪಿಇಎನ್ 2010 ದಿನಾಂಕ:19.08.2010

(6) ಸರ್ಕಾರಿ ಆದೇಶ ಸಂಖ್ಯೆ:ಅಇ (ವಿ) 27 ಎಸ್‌ಆರ್‌ಪಿ 2010 ದಿನಾಂಕ:17.10.2010

<u>ಪ್ರಸ್ತಾವನೆ:–</u>

ಮೇಲೆ (1) ರಲ್ಲಿ ಓದಲಾದ ದಿನಾಂಕ: 24.12.2009ರ ಸರ್ಕಾರಿ ಆದೇಶದಲ್ಲಿ ವಿಶ್ವವಿದ್ಯಾಲಯಗಳ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಬೋಧಕ ಮತ್ತು ತತ್ಸಮಾನ ವರ್ಗದವರಿಗೆ 2006ರ ಪರಿಷ್ಕೃತ ಯುಜಿಸಿ ವೇತನ ಶ್ರೇಣಿಗಳನ್ನು ವಿಸ್ತರಿಸಲಾಗಿರುತ್ತದೆ.

ಮೇಲೆ (2) ರಲ್ಲಿ ಓದಲಾದ ದಿನಾಂಕ: 24.03.2010ರ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಗಳ ಬೋಧಕ ವರ್ಗದವರಿಗೆ 2006ರ ಪರಿಷ್ಕೃತ ಯುಜಿಸಿ/ಐಸಿಎಆರ್ ವೇತನ ಶ್ರೇಣಿಗಳನ್ನು ವಿಸ್ತರಿಸಲಾಗಿರುತ್ತದೆ.

ಮೇಲೆ (3) ರಲ್ಲಿ ಓದಲಾದ ದಿನಾಂಕ: 24.06.2010ರ ಸರ್ಕಾರಿ ಆದೇಶದಲ್ಲಿ ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಯಲ್ಲಿರುವ ನ್ಯಾಯಾಂಗ ಅಧಿಕಾರಿಗಳ ವೇತನ ಶ್ರೇಣಿಗಳನ್ನು ಪರಿಷ್ಕರಿಸಲಾಗಿರುತ್ತದೆ.

ಮೇಲಿನಂತೆ ಯುಜಿಸಿ/ಐಸಿಎಆರ್/ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಗಳನ್ನು ದಿನಾಂಕ: 1.1.2006ರಿಂದ ಪರಿಷ್ಕರಿಸಿರುವ ಹಿನ್ನೆಲೆಯಲ್ಲಿ ದಿನಾಂಕ: 1.1.2006 ರಂದು ಮತ್ತು ತದನಂತರದಲ್ಲಿ 2006ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ವೇತನ ಪಡೆದು ನಿವೃತ್ತರಾದ ಅಥವಾ ಸೇವೆಯಲ್ಲಿರುವಾಗ ಮೃತಪಟ್ಟ ಬೋಧಕ ಮತ್ತು ತತ್ಸಮಾನ ವರ್ಗದವರ/ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆ ದರಗಳನ್ನು

ದಿನಾಂಕ: 1.1.2006ರಿಂದ ಕಾಲಕಾಲಕ್ಕೆ ಕ್ರಮಬದ್ದಗೊಳಿಸುವುದನ್ನು ಸರ್ಕಾರವು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ (ವಿಶೇಷ) 21 ಪಿಇಎನ್ 2010**
**ಬೆಂಗಳೂರು, ದಿನಾಂಕ: 25ನೇ ನವೆಂಬರ್ 2010**

2006ರ ಯುಜಿಸಿ/ಐಸಿಎಆರ್/ಎಫ್ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ವೇತನ ಪಡೆದು ದಿನಾಂಕ: 01.01.2006 ರಂದು ಮತ್ತು ತದನಂತರ ನಿವೃತ್ತರಾದ ಅಥವಾ ಸೇವೆಯಲ್ಲಿರುವಾಗ ಮೃತಪಟ್ಟ ಬೋಧಕ ಮತ್ತು ತತ್ಸಮಾನ ವರ್ಗದವರಿಗೆ ಹಾಗೂ ನಿವೃತ್ತ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆ ದರಗಳನ್ನು ಕೆಳಗಿನಂತೆ ಕ್ರಮಬದ್ದಗೊಳಿಸಲು ಸರ್ಕಾರವು ಹರ್ಷಿಸುತ್ತದೆ.

| ದಿನಾಂಕ | ತುಟ್ಟಿಭತ್ಯೆ ದರ |
|---|---|
| 01.01.2006 | ತುಟ್ಟಿಭತ್ಯೆ ಇಲ್ಲ |
| 01.07.2006 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.02 ರಷ್ಟು |
| 01.01.2007 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.06 ರಷ್ಟು |
| 01.07.2007 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.09 ರಷ್ಟು |
| 01.01.2008 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.12 ರಷ್ಟು |
| 01.07.2008 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.16 ರಷ್ಟು |
| 01.01.2009 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.22 ರಷ್ಟು |
| 01.07.2009 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.27 ರಷ್ಟು |
| 01.01.2010 | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.35 ರಷ್ಟು |

ಮುಂದುವರೆದು ಸರ್ಕಾರವು ದಿನಾಂಕ:1.7.2010ರಿಂದ ಜಾರಿಗೆ ಬರುವಂತೆ ದಿನಾಂಕ: 01.01.2006 ರಂದು ಅಥವಾ ನಂತರ 2006ರ ಪರಿಷ್ಕೃತ ಯುಜಿಸಿ/ಐಸಿಎಅರ್/ಎಫ್ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ವೇತನ ಪಡೆದು ನಿವೃತ್ತರಾದ ಬೋಧಕ ಮತ್ತು ತತ್ಸಮಾನ ವರ್ಗದವರಿಗೆ/ನ್ಯಾಯಾಂಗ ಅಧಿಕಾರಿಗಳಿಗೆ ಮತ್ತು ಕುಟುಂಬ ನಿವೃತ್ತಿ ವೇತನದಾರರಿಗೆ ಲಭ್ಯವಿರುವ ತುಟ್ಟಿಭತ್ಯೆ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 35 ರಿಂದ 45ಕ್ಕೆ ಹೆಚ್ಚಿಸಿ ಮಂಜೂರು ಮಾಡಿದೆ.

ಈ ಆದೇಶದಿಂದಾಗಿ ಪಾವತಿಸಬೇಕಾದ ತುಟ್ಟಿಭತ್ಯೆಯ ಮೊತ್ತವನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿಸತಕ್ಕದ್ದು.

ತುಟ್ಟಿಭತ್ಯೆ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ

ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ
ಮತ್ತು ಅವರ ಹೆಸರಿನಲ್ಲಿ,

(ಪದ್ಮಾವತಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ವಿಶ್ರಾಂತಿ ವೇತನ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಕಂದಾಯ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5. ಸರ್ಕಾರದ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ/ಕೃಷಿ ಮತ್ತು ತೋಟಗಾರಿಕೆ ಇಲಾಖೆ/ಕಾನೂನು ಇಲಾಖೆ.
6. ಸರ್ಕಾರದ ಕಾರ್ಯದರ್ಶಿ ಆರ್ಥಿಕ ಇಲಾಖೆ (ವೆಚ್ಚ)/(ಆಯವ್ಯಯ ಮತ್ತು ಸಂಪನ್ಮೂಲ).
7. ಸರ್ಕಾರದ ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ.
8. ನಿರ್ದೇಶಕರು, ರಾಜ್ಯ ಖಜಾನೆ ಇಲಾಖೆ, ಬೆಂಗಳೂರು
9. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
10. ಶಾಖೆಯ ರಕ್ಷಕ ಕಡತ/ ವಾರದ ರಾಜ್ಯಪತ್ರ.